**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ; ನ್ಯಾಯಾಲಯ, ಶ್ರೀರಂಗಪಟ್ಟಣ.</u>** PW-1

ಸಾಕ್ಷಿಗೆ ಪ್ರಮಾಣ ವಚನ ಮಾಡಲಾದ ದಿ04.11.2025

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ</u>

ನನಗೆ ಓದಲು ಹಾಗೂ ಬರೆಯಲು ಬರುವುದಿಲ್ಲ. ನನಗೆ ಸಹಿ ಮಾಡಲು ಬರುವುದಿಲ್ಲ. ಅಪಘಾತವು ನಿಖರವಾಗಿ ಎಲ್ಲಿ ಆಗಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ಕಾರು ಹಾಗೂ ಸ್ಕೂಟರ್ ನಡುವೆ ಅಪಘಾತ ಆಗಿರುತ್ತದೆ. ನನ್ನ ಮಗನು ಗಾರೆ ಕೆಲಸ ಮಾಡುತ್ತಿದ್ದನು ಎಂದರೆ ಸರಿ.

ನನ್ನ ಮಗನಿಗೆ ಕುಡಿಯುವ ಅಭ್ಯಾಸ ಇತ್ತು ಎಂದರೆ ಸರಿ. ಆ ದಿನ ನನ್ನ ಮಗನ ಜೊತೆ ಆತನ ಇಬ್ಬರು ಸ್ನೇಹಿತರು ಕೆಲಸ ಮುಗಿಸಿಕೊಂಡು ಬರುತ್ತಿದ್ದರು ಎಂದರೆ ಸರಿ. ಆ ದಿನ ಬರುತ್ತಿದ್ದ ಸಂದರ್ಬದಲ್ಲಿ ನನ್ನ ಮಗ ಹಾಗೂ ಇಬ್ಬರು ಸ್ನೇಹಿತರು ತಲೆಗೆ ಹೆಲ್ಮೆಟ್ ಧರಿಸಿರಲಿಲ್ಲ ಎಂದರೆ ನನಗೆ ಗೊತ್ತಿರುವುದಿಲ್ಲ. ಆದಿನ ನನ್ನ ಮಗ ದ್ವಿಚಕ್ರ ವಾಹನ ಚಾಲನೆ ಮಾಡುತ್ತಿದ್ದನು ಎನ್ನುವ ಪ್ರಶ್ನೆಗೆ ಸಾಕ್ಷಿಯು ಬೇರೆಯವರು ಓಡಿಸುತ್ತಿದ್ದರು ಎಂದು ನುಡಿಯುತ್ತಾರೆ. ದೂರನ್ನು ಪೊಲೀಸ್ ಠಾಣೆಯಲ್ಲಿ ಬರೆದುಕೊಟ್ಟಿರುತ್ತೇವೆ ಎಂದರೆ ಸರಿ. ದೂರನ್ನು ಪೊಲೀಸರು ಬರೆದಿರುತ್ತಾರೆ ಎಂದರೆ ಸರಿ. ದೂರಿನಲ್ಲಿ ಏನು ಬರೆದಿರುತ್ತದೆ ಎಂದು ನಿಮಗೆ ಗೊತ್ತಿರುವುದಿಲ್ಲ ಎನ್ನುವ ಪ್ರಶ್ನೆಗೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ. ಪೊಲೀಸರು ಹೆಬ್ಬೆಟ್ಟನ್ನು ಹಾಕಲು ಹೇಳಿದ ಕಾರಣ ನಾನು ಹಾಕಿರುತ್ತೇನೆ ಎಂದರೆ ಸರಿ.

ಈ ಅಪಘಾತವು ಕಾರಿನ ಚಾಲಕನಿಂದ ಆಗಿರುವುದಿಲ್ಲ ಎಂದರೆ ಸರಿಯಲ್ಲ. ದ್ವಿಚಕ್ರ ವಾಹನ ಸವಾರನ ಅಜಾಗರೂಕತೆಯಿಂದ ಈ ಅಪಘಾತ ಆಗಿರುತ್ತದ ಎಂದರೆ ಸರಿಯಲ್ಲ. ನನ್ನ ಮಗ ತೀರಿಕೊಂಡ ಕಾರಣ ವಿಮಾ ಕಂಪನಿಯಿಂದ ನನಗೆ ಇನ್ನೂ ಹಣ ಬಂದಿರುವುದಿಲ್ಲ. ನಾನು ವಿಮ ಹಣ ತೆಗೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಅಪಘಾತದಿಂದ ನನಗೆ ಹಣ ಸಿಗಲಿ ಎಂಬ ಕಾರಣಕ್ಕೆ ಪೊಲೀಸರು ಈ ದೂರನ್ನು

ತಯಾರಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಕಾರಿನ ಚಾಲಕನದ್ದು ಯಾವುದೇ ತಪ್ಪು ಇರದಿದ್ದರೂ ಸಹಾ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯನ್ನು ನೀವು ಮೊದಲ ಬಾರಿಗೆ ಈ ನ್ಯಾಯಾಲಯದಲ್ಲಿ ನೋಡುತ್ತಿದ್ದೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ಆಸ್ಪತ್ರೆಯಲ್ಲಿ ನೋಡಿರುತ್ತೇನೆ ಎಂದು ನುಡಿಯುತ್ತಾರೆ.

ಮರುವಿಚಾರಣೆ ಇಲ್ಲ.

**ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.